



ಅರುಣ ಪಿ. ಭಟ್ಟ

## ವಾರದ ಭವಿಷ್ಯ: 13.07.2023ದಿಂದ 19.07.2023ರವರೆಗೆ




ಧಾರ್ಮಿಕ ಕಾರ್ಯದಲ್ಲಿ ಭಾಗವಹಿಸುವ ಸಾಧ್ಯತೆ ಇದೆ. ಉದ್ಯೋಗ ಹಾಗೂ ವೃತ್ತಿಗೆ ಸಂಬಂಧಿಸಿದಂತೆ ವಾರದ ಶುರುವಿನಿಂದಲೂ ಕೆಲವು ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಬೇರೆಡೆ ಕೆಲಸಗಳನ್ನು ನಿರ್ವಹಿಸಲು ನಿಮ್ಮನ್ನು ನಿಯೋಜನೆ ಮಾಡಬಹುದು. ಇದನ್ನು ಅವಕಾಶವಾಗಿ ಬಳಸಿಕೊಳ್ಳಬೇಕು ಎನ್ನುವ ನಿಮ್ಮ ಸಂಕಲ್ಪಕ್ಕೆ ಬಿಡುವಿಲ್ಲದಂತೆ ಆಗುತ್ತದೆ. ಶುಭದಿನ **14**. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.

---




ವಾರದ ಶುರುವಿನಿಂದ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಆ ಕಾರಣಕ್ಕಾಗಿ ಹಲವು ಕೆಲಸ ಕಾರ್ಯಗಳನ್ನು ಪೂರೈಸಲಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಇನ್ನು ನಿಮ್ಮ ಸಹೋದ್ಯೋಗಿಗಳ ಜತೆಗೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ **15**. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.

---




ಹಣಕಾಸಿನ ಸಂಸ್ಥೆಗಳ ಜತೆಗೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ನಿಮ್ಮ ವ್ಯಾಪಾರ ವ್ಯವಹಾರಗಳನ್ನು ಬಲಪಡಿಸುವ ಸಲುವಾಗಿ ಹೆಚ್ಚು ಶ್ರಮ ಹಾಕಲಿದ್ದೀರಿ. ಇದರಿಂದ ನಿಮ್ಮಲ್ಲಿ ಉತ್ಸಾಹ ಮೂಡಲಿದೆ. ಹೆಚ್ಚಿನ ಹಣವನ್ನು ಖರ್ಚು ಮಾಡಲಿದ್ದೀರಿ. ಮತ್ತು ಈ ಹಣವನ್ನು ಹೊಂದಿಸುವ ಸಲುವಾಗಿ ಹಣಕಾಸು ಸಂಸ್ಥೆಗಳಿಂದ ಬಂಡವಾಳ ತರಲಿದ್ದೀರಿ. ಶುಭದಿನ **19**. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿರಿ.

---




ನಿಮ್ಮ ಮಗ ಅಥವಾ ಮಗಳ ಪ್ರಗತಿ, ಏಳ್ಗೆಯಿಂದ ಮನಸಿಗೆ ಸಂತಸವಾಗುತ್ತದೆ. ಅವರು ತಮ್ಮ ಪಾಲಿನ ಜವಾಬ್ದಾರಿಯನ್ನು ತುಂಬ ಅಚ್ಚುಕಟ್ಟಾಗಿ ಮಾಡುತ್ತಿರುವುದನ್ನು ಗಮನಿಸುತ್ತೀರಿ. ಆದಾಯ ಮೂಲಗಳು ಹೆಚ್ಚಿಸಿಕೊಳ್ಳುವುದರಲ್ಲಿ ಸಫಲರಾಗಲಿದ್ದು, ಅದರಿಂದ ಅನುಕೂಲ ದೊರೆಯಲು ಆರಂಭವಾಗುತ್ತದೆ. ನಿಮ್ಮಲ್ಲಿ ಸಂತಸವಾದ ವಾತಾವರಣ ಸೃಷ್ಟಿಯಾಗುತ್ತದೆ. ಶುಭದಿನ **15**. ಹನುಮಾನ್ ಚಾಲೀಸ್ ಪಠಿಸಿರಿ.

---




ವಾರದ ಶುರುವಿನಿಂದಲೇ ಅಂದುಕೊಂಡ ಕೆಲಸಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಉದ್ಯೋಗ ಜೀವನದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಇದಾಗಿರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ಶುಭದಿನ **16**. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.

---




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಆದರೆ ಈ ನಿಯಮದಿಂದ ನೀವು ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಅದಕ್ಕಾಗಿ ಅವರಿಗೆ ಗೌರವ ಹಾಗೂ ಅಧಿಕಾರ ನೀಡುತ್ತೀರಿ. ಶುಭದಿನ **14**. ಆದಿತ್ಯ ಹೃದಯ ಪಠಿಸಿರಿ.

---




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡಿ ಮುಗಿಸುತ್ತಾರೆ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಶುಭದಿನ **17**. ಚಂಡಿ ಪಾರಾಯಣ ಮಾಡಿರಿ.

---




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಆದರೆ ಪರಿಣಾಮಕಾರಿಯಾದ ಕಾರ್ಯ ಅನುಷ್ಠಾನಕ್ಕೆ ಹೆಚ್ಚು ಸಿಬ್ಬಂದಿಯ ಅಗತ್ಯ ಬರುತ್ತದೆ. ಶುಭದಿನ **18**. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.

---




ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಅಗತ್ಯ ವಸ್ತುಗಳನ್ನು ಖರೀದಿ ಮಾಡುವ ಸಾಧ್ಯತೆ ಇದೆ. ಆ ಮೂಲಕ ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಆದರೆ ಸಲಕರಣೆಗಳ ಖರೀದಿಗೆ ಹೆಚ್ಚಿನ ಹಣ ಖರ್ಚಾಗಲಿದೆ. ಹಣ ಹೂಡಿಕೆ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಈ ಅವಧಿಯಲ್ಲಿ ದೈಹಿಕ ಸಮಸ್ಯೆಗಳು ಕಾಡಬಹುದು. ಶುಭದಿನ **19**. ವಿಷ್ಣು ಸಹಸ್ರನಾಮ ಪಠಿಸಿರಿ.

---




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಆ ಮೂಲಕ ಜೀವನಶೈಲಿ ಹಾಗೂ ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸಾಧ್ಯವಾಗುತ್ತದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಇದರಿಂದ ನಿಮಗೆ ಸಂತೋಷವಾಗುತ್ತದೆ. ಸಂಗಾತಿಗೆ ಉಡುಗೊರೆ ನೀಡುತ್ತೀರಿ. ಶುಭದಿನ **16**. ಶಿವಕವಚ ಪಠಣ ಮಾಡಿರಿ.

---




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೀಡು ಮಾಡಿದ್ದ ವಾತಾವರಣವು ಕರಗಲಿದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅನುಕೂಲಕರವಾಗಿ ಪರಿಣಮಿಸಲಿದೆ. ಆಹಾರ ಪಥ್ಯವನ್ನು ಅನುಸರಿಸಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಶುಭದಿನ **17**. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.

---




ಈ ವಾರ ನಿಮ್ಮ ಧೈರ್ಯ ಹೆಚ್ಚಳ ಆಗಲಿದೆ. ಈ ಹಿಂದೆ ಪೂರ್ಣಗೊಳಿಸಲು ಸಾಧ್ಯವಾಗದಂಥ ಹಲವು ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಆಗುತ್ತದೆ. ವಾರದ ಮೊದಲ ಭಾಗವು ಆರೋಗ್ಯದ ಮೇಲೆ ಅಡ್ಡ ಪರಿಣಾಮ ಬೀರುತ್ತದೆ. ಇದರಿಂದ ನಿಮಗೆ ಚಿಂತೆ ಉಂಟಾಗುತ್ತದೆ. ವಾರದ ದ್ವಿತೀಯಾರ್ಧದಲ್ಲಿ ಆರೋಗ್ಯದಲ್ಲಿ ಚೇತರಿಕೆ ಕಾಣುತ್ತದೆ. ಶುಭದಿನ **15**. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.